# AKKAMAHADEVI WOMEN'S UNIVERSITY, VIJAYAPURA

......................................................................

**DATE: 24-02-2018**

**ಪ್ರಕಟಣೆಯ ಕೃಪೆಗಾಗಿ............**

ವಿಜಯಪುರ: ಜೀವನದಲ್ಲಿ ಸೋತವರನ್ನೂ ಬದುಕುವಂತೆ ಮಾಡುವುದೇ ನಿಜವಾದ ಶಿಕ್ಷಣದ ಉದ್ದೇಶ ಎಂದು ರಾಜ್ಯ ಮಾಹಿತಿ ಆಯೋಗದ ಮುಖ್ಯ ಆಯುಕ್ತ ಡಾ.ಸುಚೇತನ್ ಸ್ವರೂಪ ಅಭಿಪ್ರಾಯಪಟ್ಟರು.

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಮಾಧ್ಯಮ ಮನೆ ಚಟುವಟಿಕೆ ಅಂಗವಾಗಿ ಶನಿವಾರ ಹಮ್ಮಿಕೊಂಡಿದ್ದ 'ಮಾಧ್ಯಮ ಮತ್ತು ಮಾಹಿತಿ ಹಕ್ಕು ಕಾಯ್ದೆ-2005' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪತ್ರಕರ್ತರಿಗೆ ಕೇವಲ ಸಹಾನುಭೂತಿ ಇದ್ದರೇ ಸಾಲದು. ಅದರ ಜೊತೆಗೆ ಅನುಭೂತಿ ಹಾಗೂ ಸ್ಪಂದಿಸುವಂತಹ ಗುಣ ಹೊಂದಿರಬೇಕು ಎಂದು ಅವರು ವಿದ್ಯಾರ್ಥಿನಿಯರಿಗೆ ಕಿವಿಮಾತು ಹೇಳಿದರು.

ಪತ್ರಿಕೋದ್ಯಮ ಈಗ ಬಹಳಷ್ಟು ಬದಲಾವಣೆಯಾಗಿದೆ. ಈ ಆಧುನಿಕ ಯುಗದಲ್ಲಿ ತಾಂತ್ರಿಕ ಕೌಶಲ್ಯತೆ, ಮಾತುಗಾರಿಕೆ, ಸ್ಪಂದನೆ ಮತ್ತು ಸಾಮಾನ್ಯ ಜ್ಞಾನದ ಅವಶ್ಯಕತೆ ಇದೆ ಎಂದು ಹೇಳಿದರು.

ಮಾಧ್ಯಮ ಕ್ಷೇತ್ರಗಳಲ್ಲಿ ವಿಫುಲ ಅವಕಾಶಗಳಿವೆ. ಆದರೆ ಈ ಅವಕಾಶಗಳನ್ನು ಬಳಸಿಕೊಳ್ಳುವ ಕ್ರಿಯಾಶೀಲತೆ ವಿದಾರ್ಥಿಗಳಲ್ಲಿ ಇರಬೇಕು. ಭಾಷೆ ಮೇಲೆ ಹಿಡಿತ, ವಿಶ್ಲೇಷಣಾ ಸಾಮರ್ಥ್ಯ ಹಾಗೂ ಅದನ್ನು ಪ್ರಸ್ತುತ ಪಡಿಸುವ ಕಲೆ ತಿಳಿದಿರಬೇಕು ಎಂದು ಅವರು ತಿಳಿಸಿದರು.

ಮಾಹಿತಿ ಕಾಯ್ದೆಯನ್ನು ಬಳಸದೇ ಮಾಹಿತಿಯನ್ನು ಪಡೆಯುವುದು ನಿಜವಾದ ಪತ್ರಕರ್ತನ ಗುಣ ಎಂದು ಹೇಳಿದ ಅವರು, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವವನ್ನು ಹರಡಲು ಆರಂಭವಾದ ಪತ್ರಿಕೋದ್ಯಮ ಇಂದು ಉದ್ಯಮವಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಪ್ರೊ. ಓಂಕಾರ ಕಾಕಡೆ ಪರಿಚಯಿಸಿದರು. ವಿಭಾಗದ ವಿದ್ಯಾರ್ಥಿನಿ ಗೌರಮ್ಮ ಚಲವಾದಿ ಸ್ವಾಗತಿಸಿದರು. ಶಿಲ್ಪಾ ಕಾಂಬಳೆ ನಿರೂಪಿಸಿದರು. ಸವಿತಾ ಬಡಕಂಬಿ ವಂದಿಸಿದರು.

**ಫೋಟೋ ಕ್ಯಾಪ್ಷನ್:**

1) **ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಮಾಧ್ಯಮ ಮನೆ ಚಟುವಟಿಕೆ ಅಂಗವಾಗಿ ಶನಿವಾರ ಹಮ್ಮಿಕೊಂಡಿದ್ದ 'ಮಾಧ್ಯಮ ಮತ್ತು ಮಾಹಿತಿ ಹಕ್ಕು ಕಾಯ್ದೆ-2005' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ರಾಜ್ಯ ಮಾಹಿತಿ ಆಯೋಗದ ಮುಖ್ಯ ಆಯುಕ್ತ ಡಾ.ಸುಚೇತನ್ ಸ್ವರೂಪ ಮಾತನಾಡಿದರು.**

2) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಮಾಧ್ಯಮ ಮನೆ ಚಟುವಟಿಕೆ ಅಂಗವಾಗಿ ಶನಿವಾರ ಹಮ್ಮಿಕೊಂಡಿದ್ದ 'ಮಾಧ್ಯಮ ಮತ್ತು ಮಾಹಿತಿ ಹಕ್ಕು ಕಾಯ್ದೆ–2005' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರು ಹೊರತಂದ ಮಹಿಳಾ ಧ್ವನಿ ವಿಶೇಷ ಸಂಚಿಕೆಯನ್ನು ರಾಜ್ಯ ಮಾಹಿತಿ ಆಯೋಗದ ಮುಖ್ಯ ಆಯುಕ್ತ ಡಾ.ಸುಚೇತನ್ ಸ್ವರೂಪ ಬಿಡುಗಡೆ ಮಾಡಿದರು.




